ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ:21:ಖಾಹುಭ:2020-21:ಬೆಂ.ಗ್ರಾ:ನೇವಿ-2

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಸೌಧ, ಶೇಷಾದ್ರಿ ರಸ್ತೆ,
ಬೆಂಗಳೂರು, ದಿನಾಂಕ:27.04.2023.

# ಸುತ್ತೋಲೆ

**ವಿಷಯ:** ಇಲಾಖಾ ವ್ಯಾಪ್ತಿಯ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಸಹಾಯಕ ಪ್ರಾಧ್ಯಾಪಕರ ನೇರ ನೇಮಕಾತಿ ಹುದ್ದೆಗೆ ವಯೋಮಿತಿ ವಿನಾಯಿತಿಗೆ ಸಲ್ಲಿಸುವ ಅರ್ಜಿಗಳಿಗೆ ದೃಢೀಕರಣ ನೀಡುವ ಬಗ್ಗೆ.

**ಉಲ್ಲೇಖ:**
1) ಸರ್ಕಾರದ ಪತ್ರ ಸಂಖ್ಯೆ:ಇಡಿ/240/ಯುಪಿಸಿ/2014, ದಿನಾಂಕ:01.09.2017
2) ಸರ್ಕಾರದ ಆದೇಶ ಸಂಖ್ಯೆ:ಇಡಿ:49:ಯುಪಿಸಿ:2018, ದಿನಾಂಕ:20.06.2018
3) ಸರ್ಕಾರದ ಸೇರ್ಪಡೆ ಆದೇಶ ಸಂಖ್ಯೆ:ಇಡಿ:87:ಯುಪಿಸಿ:2016, ದಿನಾಂಕ: 13.12.2018
4) ಸರ್ಕಾರದ ಪತ್ರ ಸಂಖ್ಯೆ:ಇಡಿ:160:ಯುಪಿಸಿ:2022(ಇ), ದಿನಾಂಕ:05.12.2022

** ** **

ಪ್ರಸ್ತಾಪಿತ ವಿಷಯಕ್ಕೆ ಸಂಬಂಧಿಸಿದಂತೆ, ಇಲಾಖಾ ವ್ಯಾಪ್ತಿಯ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಸ್ವ-ಇಚ್ಛ/ವಯೋನಿವೃತ್ತಿ, ರಾಜೀನಾಮೆ, ನಿಧನ ಮತ್ತು ಇನ್ನಿತರ ಕಾರಣಗಳಿಂದ ಖಾಲಿಯಾಗುವ ಬೋಧಕ ವರ್ಗದ ಸಹಾಯಕ ಪ್ರಾಧ್ಯಾಪಕರ ಹುದ್ದೆಯನ್ನು ನೇರ ನೇಮಕಾತಿ ಮುಖಾಂತರ ಭರ್ತಿ ಮಾಡಿಕೊಳ್ಳುವ ಸಂಬಂಧ ಪ್ರಸ್ತಾವನೆ ಸಲ್ಲಿಸಲು ಉಲ್ಲೇಖ(1) ಹಾಗೂ ಈ ಸಂಬಂಧ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಆಡಳಿತ ಮಂಡಳಿಯವರಿಗೆ ಅಧಿಸೂಚನೆ ಹೊರಡಿಸಲು ಅನುಮತಿ ನೀಡುವ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ(4)ರ ಪತ್ರದಲ್ಲಿ ಇಲಾಖಾ ಮುಖ್ಯಸ್ಥರಿಗೆ ಅಧಿಕಾರ ಪ್ರತ್ಯಾಯೋಜಿಸಲಾಗಿದೆ. ಉಲ್ಲೇಖ(1) ಮತ್ತು (4)ರ ಸರ್ಕಾರದ ಪತ್ರಗಳನ್ವಯ ಇಲಾಖಾ ವ್ಯಾಪ್ತಿಯ ವಿವಿಧ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ ವರ್ಗದ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳ ನೇರ ನೇಮಕಾತಿಗೆ ಸಂಬಂಧಿಸಿದಂತೆ ಈಗಾಗಲೇ ಈ ಕಛೇರಿಯ ವಿವಿಧ ದಿನಾಂಕಗಳ ಪತ್ರಗಳಲ್ಲಿ ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರಿಗೆ ಅನುಮತಿ ನೀಡಲಾಗಿರುತ್ತದೆ.

ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಬೋಧಕ ವರ್ಗದ ಸಹಾಯಕ ಪ್ರಾಧ್ಯಾಪಕರ ಖಾಲಿ ಹುದ್ದೆ ಭರ್ತಿಗೆ ಸಂಬಂಧಿಸಿದಂತೆ ಈಗಾಗಲೆ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪೂರ್ಣಕಾಲಿಕ ಬೋಧಕರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕರು ಖಾಯಂ ಸಹಾಯಕ ಪ್ರಾಧ್ಯಾಪಕರಿಗೆ ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ವಯೋಮಿತಿಯಲ್ಲಿ ವಿನಾಯಿತಿ ನೀಡುವ ಸಂಬಂಧ ಉಲ್ಲೇಖ(3)ರ ಸರ್ಕಾರದ ಸೇರ್ಪಡೆ ಆದೇಶದಲ್ಲಿ ಅವರು ಬೋಧನಾನುಭವ ಹೊಂದಿರುವ ಸೇವಾ ಅವಧಿ ಅಥವಾ 05 ವರ್ಷಗಳು ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ಅವಧಿಗೆ ಗರಿಷ್ಟ ವಯೋಮಿತಿಯಲ್ಲಿ ವಿನಾಯಿತಿ ನೀಡಲು ಹಾಗೂ ವಿನಾಯಿತಿ ನೀಡುವ ಪೂರ್ವದಲ್ಲಿ ಸಂಬಂಧಿಸಿದ ಅರ್ಜಿಗಳನ್ನು ಪ್ರಾದೇಶಿಕ ಜಂಟಿ ನಿರ್ದೇಶಕರು ಹಾಗೂ ಇಲಾಖಾ ಮುಖ್ಯಸ್ಥರಿಂದ ದೃಢೀಕರಣಗೊಳಿಸಲು ತಿಳಿಸಲಾಗಿರುತ್ತದೆ.

ಸದರಿ ಸರ್ಕಾರದ ಸೇರ್ಪಡೆ ಆದೇಶದನ್ವಯ ವಿವಿಧ ವಲಯ ಪ್ರಾದೇಶಿಕ ಜಂಟಿ ನಿರ್ದೇಶಕರಿಂದ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಯಂ ಬೋಧಕರಾಗಿ ಕರ್ತವ್ಯ ನಿರ್ವಹಿಸುತ್ತಿರುವ

..2..

ಬೋಧಕರು ಅರ್ಜಿ ಸಲ್ಲಿಸಲು ವಯೋಮಿತಿ ವಿನಾಯಿತಿ ಕೋರಿ ಸಲ್ಲಿಸುವ ಅರ್ಜಿಗಳನ್ನು ಕೂಲಂಕುಷವಾಗಿ ಪರಿಶೀಲಿಸದೆ ಕಾಲೇಜುಗಳಿಂದ ಸಲ್ಲಿಸಲಾಗುವ ಪ್ರಸ್ತಾವನೆಗಳನ್ನು ಯಥಾವತ್ ಈ ಕಛೇರಿಗೆ ಸಲ್ಲಿಸುತ್ತಿರುವುದು ಕಂಡುಬಂದಿರುತ್ತದೆ.

ಕರ್ನಾಟಕ ಶಿಕ್ಷಣ ಸಂಸ್ಥೆ(ಕಾಲೇಜು ಶಿಕ್ಷಣ)ನಿಯಮಗಳು 2003ರ ನಿಯಮ 3(4)ರನ್ವಯ ಪ್ರಾದೇಶಿಕ ಜಂಟಿ ನಿರ್ದೇಶಕರು ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಿಂದ ಸಲ್ಲಿಸಲಾಗುವ ಪ್ರಸ್ತಾನೆಗಳು ನಿಯಮಗಳನ್ನು ಪೂರೈಸಿರುವ ಬಗ್ಗೆ ಪರಾಮರ್ಶಿಸಿ, ಕ್ರಮಬದ್ಧವಾಗಿದ್ದಲ್ಲಿ ಮಾತ್ರ ಈ ಕಛೇರಿಗೆ ಸ್ಪಷ್ಟ ಅಭಿಪ್ರಾಯ ಸಹಿತ ಶಿಫಾರಸ್ಸು ಮಾಡಬೇಕಾಗಿದ್ದು, ಆದರೆ ಸದರಿ ನಿಯಮವನ್ನು ಪಾಲಿಸದಿರುವುದು ಕಂಡುಬಂದಿರುತ್ತದೆ.

ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ನೇರ ನೇಮಕಾತಿ ಮುಖಾಂತರ ಬೋಧಕ ವರ್ಗದ ಸಹಾಯಕ ಪ್ರಾಧ್ಯಾಪಕರ ಹುದ್ದೆ ಭರ್ತಿಯು ಮುಖ್ಯ ವಿಷಯವಾಗಿದ್ದು, ಸ್ವೀಕರಿಸುವ ಪ್ರಸ್ತಾವನೆಗಳನ್ನು ಪರಮಾರ್ಶಿಸಿ ಅರ್ಹರಿದ್ದಲ್ಲಿ ಮಾತ್ರ ಈ ಕಛೇರಿಗೆ ಸಂಬಂಧಿಸಿದ ದಾಖಲೆಗಳೊಂದಿಗೆ ಸಲ್ಲಿಸುವುದು ತಮ್ಮ ಆದ್ಯ ಕರ್ತವ್ಯವಾಗಿದೆ ಎಂಬುದನ್ನು ಪುನರುಚ್ಚರಿಸುತ್ತಾ, ಸರ್ಕಾರದ ಸೇರ್ಪಡೆ ಆದೇಶ ಸಂಖ್ಯೆ:ಇಡಿ:87:ಯುಪಿಸಿ:2016, ದಿನಾಂಕ:13.12.2018ರನ್ವಯ "ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಪೂರ್ಣಕಾಲಿಕ ಬೋಧನಾನುಭವ" ಹೊಂದಿರುವ ಅಭ್ಯರ್ಥಿಗಳಿಗೆ ವಯೋಮಿತಿ ವಿನಾಯಿತಿ ನೀಡುವ ಸಂದರ್ಭದಲ್ಲಿ ಈ ಕೆಳಕಂಡ ಅಂಶಗಳ ಬಗ್ಗೆ ತಮ್ಮ ಹಂತದಲ್ಲೇ ಪರಿಶೀಲಿಸಿ ದೃಢೀಕರಿಸುವಂತೆ

1) **ಆಡಳಿತ ಮಂಡಳಿಯ ಪೂರ್ಣಕಾಲಿಕವಾಗಿ ಮಾಡಿದ ನೇಮಕಾತಿ ಆದೇಶ ಪ್ರತಿ**
2) **ಕರ್ತವ್ಯಕ್ಕೆ ವರದಿ ಮಾಡಿಕೊಂಡ ಬಗ್ಗೆ ದಾಖಲೆ,**
3) **ಕರ್ತವ್ಯ ನಿರ್ವಹಿಸಿದ ವಾರ್ಷಿಕ ಕಾರ್ಯಭಾರದ ಮಾಹಿತಿ**
4) **ಕರ್ತವ್ಯ ನಿರ್ವಹಿಸಿದ ವರ್ಷಗಳು ನಿರಂತರವಾಗಿ ವೇತನ ಪಡೆದ ಬಗ್ಗೆ ದಾಖಲೆ**
5) **ಕರ್ತವ್ಯ ನಿರ್ವಹಿಸಿದ ವರ್ಷಗಳ ಹಾಜರಾತಿ**

ಹಾಗೂ ವಯೋಮಿತಿ ವಿನಾಯಿತಿಗೆ ಸಂಬಂಧಿಸಿದಂತೆ ಯಾವುದೇ ದಾಖಲೆಗಳ ಬಗ್ಗೆ ಅಸಂಗತೆಗಳು ಉಂಟಾದಲ್ಲಿ ತಮ್ಮ ಹಂತದಲ್ಲೇ ನಿರಾಕರಿಸಲು ಸಹ ತಿಳಿಸುತ್ತಾ, ಒಂದು ವೇಳೆ ಇಂತಹ ಅರ್ಹ ಅಭ್ಯರ್ಥಿಗಳು ನೇಮಕಾತಿಗೆ ಆಯ್ಕೆಗೊಂಡಲ್ಲಿ ಅಂತಹ ಅಭ್ಯರ್ಥಿಗೆ ಸಂಬಂಧಿಸಿದಂತೆ ಈ ಮೇಲ್ಕಂಡ ದಾಖಲೆಗಳ ಸಹಿತ ನೇಮಕಾತಿ ಅನುಮೋದನೆಗೆ ಪ್ರಸ್ತಾವನೆ ಸಲ್ಲಿಸುಲು ಕಟ್ಟುನಿಟ್ಟಾಗಿ ಸೂಚಿಸಲಾಗಿದೆ.

**ಕಾಲೇಜು ಶಿಕ್ಷಣ ಹೆಚ್ಚುವರಿ ನಿರ್ದೇಶಕರು(ಪ್ರ)**

**ಇವರಿಗೆ:**

1) ಇಲಾಖಾ ವ್ಯಾಪ್ತಿಯ ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರಿಗೆ
2) ಕಛೇರಿಯ ಎಲ್ಲಾ ಅಧಿಕಾರಿಗಳ ಆಪ್ತಶಾಖೆ
3) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಮಾಹಿತಿ ವಿಭಾಗ, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು-ಇಲಾಖಾ ವೆಬ್‌ಸೈಟ್‌ರಲ್ಲಿ ಪ್ರಕಟಿಸುವುದು
4) ಕಛೇರಿ ಪ್ರತಿ